222

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಭರೂಕ ಪವರ್ ಕಾರ್ಪೋರೇಷನ್ ಲಿಮಿಟೆಡ್ ರವರಿಗೆ ಬೆಳಗಾವಿ ಜಿಲ್ಲೆಯ ವಿವಿಧ ಪ್ರದೇಶದಲ್ಲಿ 42.50 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಕುರಿತು.

ಓದಲಾಗಿದೆ: 1 ಸರ್ಕಾರದ ತತ್ವಶಃ ಅನುಮೋದನೆ ದಿನಾಂಕ: 23.07.2014.

2 ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: RED/08/BPCL-4.8 MW to 42.50 MW/Raybagh/2014/3786 ದಿನಾಂಕ: 02.09.2014.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ
ಸಂ. 2400
ದಿ. 17/9/14
ಬೆಂಗಳೂರು

* * *

ಪ್ರಸ್ತಾವನೆ :-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಮೆ: ಭರೂಕ ಪವರ್ ಕಾರ್ಪೋರೇಷನ್ ಲಿಮಿಟೆಡ್, ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಸನ್‌ಸುದ್ದಿ ಗ್ರಾಮದಲ್ಲಿ 4.8 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು ಎರಡು ವರ್ಷಗಳಲ್ಲಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸುವ ಷರತ್ತಿಗೊಳಪಟ್ಟು ತತ್ವಶಃ ಅನುಮೋದನೆ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು, ಮೆ: ಭರೂಕ ಪವರ್ ಕಾರ್ಪೋರೇಷನ್ ಲಿಮಿಟೆಡ್, ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಸನ್‌ಸುದ್ದಿ ಗ್ರಾಮದಲ್ಲಿ ತತ್ವಶಃ ಅನುಮೋದನೆ ನೀಡಿದ್ದ 4.8 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 42.50 ಮೆ.ವ್ಯಾ.ಗೆ. ಹೆಚ್ಚಿಸುವ ಕುರಿತಂತೆ, ಅಭಿವೃದ್ಧಿದಾರರು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸಿರುವುದಾಗಿ ಹಾಗೂ ಯೋಜನಾ ಪ್ರದೇಶವು ಸನ್‌ಸುದ್ದಿ, ಬ್ಯಾಕುಡ್ ಮತ್ತು ಕಟ್ಟಭಾವಿ ಗ್ರಾಮಗಳ ಪ್ರದೇಶಗಳನ್ನು ಒಳಗೊಂಡಿರುವುದಾಗಿ ತಿಳಿಸುತ್ತಾ, ಯೋಜನಾ ಪ್ರದೇಶವು ಖಾಸಗಿ ಜಮೀನಿನಲ್ಲಿ ಬರುವುದಾಗಿ, ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ಗೆ ಸಂಬಂಧಿಸಿದಂತೆ ಎಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ ಮಾಡಿಕೊಳ್ಳುವುದಾಗಿ ಅಭಿವೃದ್ಧಿದಾರರು ತಿಳಿಸಿರುವುದಾಗಿ ವರದಿ ಮಾಡುತ್ತಾ, ಅಭಿವೃದ್ಧಿದಾರರು ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದ ನಿಗದಿತ ಶುಲ್ಕವನ್ನು ಪಾವತಿಸಿರುತ್ತಾರೆ. ಆದ್ದರಿಂದ ಮೆ: ಭರೂಕ ಪವರ್ ಕಾರ್ಪೋರೇಷನ್ ಲಿಮಿಟೆಡ್, ಕಂಪನಿಯವರಿಗೆ ಈಗಾಗಲೇ ತತ್ವಶಃ ಅನುಮೋದನೆ ನೀಡಿರುವ 4.8 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 42.50 ಮೆ.ವ್ಯಾ.ಗೆ ಹೆಚ್ಚಿಸಿ ಆದೇಶ ಹೊರಡಿಸಬಹುದೆಂದು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 188 ಎನ್‌ಸಿಇ 2014,**
**ಬೆಂಗಳೂರು, ದಿನಾಂಕ: 08.09.2014.**

ಮೆ: ಭರೂಕ ಪವರ್ ಕಾರ್ಪೋರೇಷನ್ ಲಿಮಿಟೆಡ್, ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಸನ್‌ಸುದ್ದಿ ಗ್ರಾಮದಲ್ಲಿ 4.8 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿದ್ದ ತತ್ವಶಃ ಅನುಮೋದನೆಯ ಸಾಮರ್ಥ್ಯವನ್ನು 42.50 ಮೆ.ವ್ಯಾ.ಗೆ ಹೆಚ್ಚಿಸಿ, ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಹಂಚಿಕೆ ಮಾಡಲಾಗಿದೆ.

189
AGM(W)
18/9/14

Wind Sectior
vard No. 1466
Date: 20-09-14
Sig.

Head AGA
19/9/14

---2)

221



| Toposheet No. | Proposed capacity in MW | Near by villages of the proposed area and District. | Geographical area description of the project |
|---|---|---|---|
| 47 L/15 | 42.50 MW (25 Nos x1700 KW) | Sansuddi, Byakud and Katabhavi villages in Raybagh Taluk, Belgaum District. | The identified area is covered by Private land near Ghataprabha Left Canal and the road crossing towards Kanakanawadi to Raybagh. The area is having several peaks and is covered in the following Geographical co-ordinates as:<br><br>**Latitude**: 16°23'24.9"- 16°25'0" N<br>**Longitude**: 74°50'0"- 74°53'5.3" E<br>**Ridge peaks:** 697m and 634m Amsl |

1. ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ 17.8.2011ರಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ, ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.
3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೊ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಯನ್ನು ಒಂದು ವರ್ಷದಲ್ಲಿ ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ತ್ರಿಪ್ರತಿಗಳಲ್ಲಿ ಸಲ್ಲಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ /ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
7. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.
8. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

----3)